**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂಃ ರವರ ನ್ಯಾಯಾಲಯ, ಮೂಡಿಗೆರೆ**
**ಸಿ.ಸಿ.211/2025**

| | | |
|---|---|---|
| ಸಾಕ್ಷಿದಾರರ ಹೆಸರು | : ನಾಗಪ್ಪ ತುಕ್ಕನ್ನವರ್ | ಪ್ರಾಸಾ-5 |
| ತಂದೆಯ ಹೆಸರು | : ಪಾವಡೆಪ್ಪ | ಚಾಸಾ-5 |
| ವಯಸ್ಸು | : 31 ವರ್ಷ | ಪ್ರಮಾಣ ವಚನ ಬೋಧಿಸಲಾದ |
| ಉದ್ಯೋಗ | : ಸಿ.ಪಿ.ಸಿ. | ದಿನಾಂಕಃ 19.08.2025. |
| ವಾಸಸ್ಥಳ | : ಬಣಕಲ್ ಪೋಲಿಸ್ ಠಾಣೆ. | |

**:ಮುಖ್ಯ ವಿಚಾರಣೆಃ ಪ್ರಾಜ್ಞ್ಯಾಸ.ಸ.ಅ. ರವರಿಂದ:**

ನಾನು 2024 ರಿಂದ ಇಲ್ಲಿಯವರೆಗೂ ಬಣಕಲ್ ಪೋಲಿಸ್ ಠಾಣೆಯಲ್ಲಿ ಸಿ.ಪಿ.ಸಿ ಆಗಿ ಕರ್ತವ್ಯ ನಿರ್ವಹಿಸಿರುತ್ತೇನೆ. ಆರೋಪಿಯು ಗೈರು ಹಾಜರಿದ್ದು ಅವರ ಗುರುತುವಿಕೆಯಲ್ಲಿ ತಕರಾರು ಇಲ್ಲ ಎಂದು ಆರೋಪಿ ಪರ ವಕೀಲರು ತಿಳಿಸಿರುತ್ತಾರೆ.

ದಿ.24.10.2024 ರಂದು ಸ.4.00 ರ ಸಮಯಕ್ಕೆ ಠಾಣೆಯಲ್ಲಿ ಕರ್ತವ್ಯದಲ್ಲಿ ನಿರತನಾಗಿದ್ದಾಗ ಚಾಸಾ-1 ರವರು ಅವರೊಟ್ಟಿಗೆ ನನ್ನನ್ನು ಇಲಾಖಾ ವಾಹನದಲ್ಲಿ ಗಸ್ತು ಕಾರ್ಯಾಚರಣೆಗೆಂದು ಕರೆದುಕೊಂಡು ಹೋಗಿರುತ್ತಾರೆ. ಅದೇ ದಿನ ಸ.5.30 ರ ಸಮಯಕ್ಕೆ ಬಣಕಲ್ ಠಾಣಾ ವ್ಯಾಪ್ತಿಯ ಬೆಟ್ಟಗೆರೆಯಲ್ಲಿ ಒಬ್ಬ ಆಸಾಮಿಯ ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದಾಗಿ ಚಾಸಾ-1 ರವರಿಗೆ ಮಾಹಿತಿ ಬಂದಿರುತ್ತದೆ. ನಂತರ ಚಾಸಾ-1 ಮತ್ತು ನಾವುಗಳು ಸ್ಥಳಕ್ಕೆ ಭೇಟಿ ನೀಡಿ ನೋಡಲಾಗಿ ಅಲ್ಲಿ ಒಬ್ಬ ವ್ಯಕ್ತಿಯು ಅಕ್ರಮವಾಗಿ ಮದ್ಯ ಮಾರಾಟ ಮಾಡುತ್ತಿರುವುದು ಕಂಡುಬಂದಿರುತ್ತದೆ. ನಂತರ ಸದರಿ ಸ್ಥಳದಲ್ಕ್ಲಿ ಹಾಜರಿದ್ದ ಇಬ್ಬರು ವ್ಯಕ್ತಿಗಳನ್ನು ಪಂಚರಾಗಿ ಬರಮಾಡಿಕೊಂಡು ಅವರ ಸಮಕ್ಷಮ ಶೋಧನೆ ಮಾಡಲಾಗಿ, ಸದರಿ ಸ್ಥಳದಲ್ಲಿ 90 ml ನ Captain Martin Whisky ಯ 34 ಪೌಚ್ ಗಳು ಸಿಕ್ಕಿರುತ್ತವೆ.

ನಂತರ ಸ್ಥಳದಲ್ಲಿಯೇ ವರದಿಯನ್ನು ತಯಾರಿಸಿ, ನಂತರ ಚಾಸಾ-4 ರವರೊಟ್ಟಿಗೆ ಸದರಿ ವರದಿಯನ್ನು ಠಾಣೆಗೆ ತಲುಪಿಸಲಾಗಿರುತ್ತದೆ. ನಂತರ ಠಾಣೆಯಲ್ಲಿ ಪ್ರ.ವ.ವ.ಯನ್ನು ದಾಖಲಿಸಿಕೊಳ್ಳಲಾಗಿರುತ್ತದೆ. ಸದರಿ ವರದಿಯನ್ನು ಖಚಿತಪಡಿಸಿಕೊಂಡ ನಂತರ ನಾವುಗಳು ಸ್ಥಳದಲ್ಲಿ ದೊರೆತ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿರುತ್ತದೆ. ನಾವು ದಾಳಿ ನಡೆಸಿದ ಕಾಲದಲ್ಲಿ ಮದ್ಯವನ್ನು ಮಾರಾಟ ಮಾಡುತ್ತಿದ್ದ ವ್ಯಕ್ತಿಗೆ ಓಡಲು ಪ್ರಯತ್ನಿಸುತ್ತಿದ್ದ ಕಾರಣ ಅವನನ್ನು ಹಿಡಿದು ಠಾಣೆಗೆ ಕರೆದುಕೊಂಡು ಹೋಗಲಾಯಿತು.

ಸಾಕ್ಷಿಯು ನಿಪಿ-1 ರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ-1(ಡಿ) ಎಂದು ಗುರುತಿಸಲಾಯಿತು. ಸಾಕ್ಷಿಯು ನ್ಯಾಯಾಲಯದ ಮುಂದಿರುವ ಎಂ.ಒ.1 ರಿಂದ 3 ನ್ನು ನೋಡಿ ಗುರುತಿಸಿರುತ್ತಾರೆ.

**ಪಾಟೀ ಸವಾಲುಃ ಆರೋಪಿ ಪರ ಶ್ರೀ ಕೆ.ಆರ್.ಹೆಚ್. ವಕೀಲರಿಂದಃ**

ದಾಳಿಗೆ ಹೋಗುವ ಮುನ್ನ ನಾನು ಚಾಸಾ-1 ರವರೊಟ್ಟಿಗೆ ಗಸ್ತು ಕಾರ್ಯಾಚರಣೆಯಲ್ಲಿ ಭಾಗಿಯಾಗಿರುತ್ತೇನೆ. ಆ ದಿನ ಸ.4.00 ರ ಸಮಯದಿಂದ ಗಸ್ತು ಕಾರ್ಯಾಚರಣೆ ಪ್ರಾರಂಭ ಮಾಡಿರುತ್ತೇವೆ. ಸ.5.30 ಕ್ಕೆ ಮಾಹಿತಿ ಬಂದ ಸಂದರ್ಭದಲ್ಲಿ ನಿರ್ದಿಷ್ಟವಾಗಿ ಎಲ್ಲಿದ್ದೆವು ಎಂದು ನೆನಪಿರುವುದಿಲ್ಲ. ನಾವು ದಾಳಿ ಮಾಡಿದ ಸ್ಥಳದಿಂದ ಮಾಹಿತಿ ಬಂದ ಸ್ಥಳಕ್ಕೆ 6 ಕೀ.ಮೀ ಅಂತರವಿರುತ್ತದೆ. ನಾವು ಘಟನಾ ಸ್ಥಳಕ್ಕೆ ಭೇಟಿ ನೀಡಿದಾಗ ಆರೋಪಿಯು ಮದ್ಯ ಮಾರಾಟ ಮಾಡುತ್ತಿರುವ ಬಗ್ಗೆ ತಿಳಿದು ಬಂದಿರುತ್ತದೆ. ಸಾರ್ವಜನಿಕರ ಮದ್ಯವನ್ನು ಖರೀದಿ ಮಾಡುವ ಸಂದರ್ಭದಲ್ಲಿ ನಾವು ಯಾವುದೇ ಫೋಟೋವನ್ನು ತೆಗೆದಿರುವುದಿಲ್ಲ. ನಾವು ದಾಳಿ ಮಾಡಿದ ಸಂದರ್ಭದಲ್ಲಿ ಸುಮಾರು 4-5 ಜನ ಸಾರ್ವಜನಿಕರು ಮದ್ಯವನ್ನು ಖರೀದಿಸುತ್ತಿದ್ದರು. ಸದರಿ ವಿಷಯದ ಕುರಿತು ಮಹಜರ್ ನಲ್ಲಿ ನಮೂದಿಸಿರುವ ಬಗ್ಗೆ ನನ್ನ ಗಮನಕ್ಕೆ ಇರುವುದಿಲ್ಲ. ಸಾಮಾನ್ಯವಾಗಿ ಎಂ.ಒ.3 ರಂತಹ ವಸ್ತುಗಳು ರಸ್ತೆ ಬದಿಯಲ್ಲಿ ಸಿಕ್ಕುತ್ತವೆ ಎಂದರೆ ಸರಿಯಲ್ಲ. ಸದರಿ ವಸ್ತುಗಳ ಸೀರಿಯಲ್ಲಿ ನಂಬರ್ ನ್ನು ಮಹಜರ್ ನಲ್ಲಿ ನಮೂದಿಸಲಾಗಿರುತ್ತದೆ. ನಾವು ಯಾವುದೇ SL ನಂಬರನ್ನು ಮಹಜರ್ ನಲ್ಲಿ ನಮೂದಿಸಿರುವುದಿಲ್ಲ ಎಂದರೆ ಸರಿಯಲ್ಲ.

ಆರೋಪಿಯ ಅಂಗಡಿಯನ್ನು ಶೋಧಿಸುವ ಪೂರ್ವದಲ್ಲಿ ನಮ್ಮಗಳ ಅಂಗ ಶೋಧನೆಯನ್ನು ಮಾಡಿಕೊಳ್ಳಲಾಗುತ್ತದೆ. ಸದರಿ ಅಂಗ ಶೋಧನೆಯ ಬಗ್ಗೆ ಮಹಜರ್ ನಲ್ಲಿ ನಮೂದಿಸಿರುವ ಬಗ್ಗೆ ನನಗೆ ತಿಳಿದಿರುವುದಿಲ್ಲ. ನಿಪಿ-2 ರಲ್ಲಿ ನಾನು ಕಂಡುಬರುತ್ತಿಲ್ಲ ಎಂದರೆ ಸರಿ. ದಾಳಿಯ ನಂತರ ಆರೋಪಿಯನ್ನು ನಿಲ್ಲಿಸಿ ಎಂ.ಒ.3 ರೊಟ್ಟಿಗೆ ಯಾವುದೇ ಫೋಟೋವನ್ನು ತೆಗೆದಿರುವುದಿಲ್ಲ. ದಾಳಿಯನ್ನು ನಡೆಸಿದ ಸಮಯದಲ್ಲಿ ಆರೋಪಿ ಅಂಗಡಿಯ ನಾಮ ಫಲಕವನ್ನು ಗಮನಿಸಿರುವುದಿಲ್ಲ. ನಾನು ಯಾವುದೇ ದಾಳಿಗೆ ಸಹಕರಿಸಿರುವುದಿಲ್ಲ ಮತ್ತು ನನ್ನ ಸಮಕ್ಷಮ ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿರುವುದಿಲ್ಲ ಎಂದರೆ ಸರಿಯಲ್ಲ. ಯಾವುದೇ ದಾಳಿ ಮಾಡದಿದ್ದರೂ ಸಹಾ ಇಲಾಖೆಯ ಅಂಕಿ ಅಂಶಗಳಿಗೊಸ್ಕರ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ. ಆರೋಪಿಗೂ, ಈ ಪ್ರಕರಣಕ್ಕೂ, ಮುದ್ದೆಮಾಲುಗಳಿಗೂ ಒಂದಕ್ಕೊಂದು ಸಂಬಂಧ ಇಲ್ಲ ಎಂದರೆ ಸರಿಯಲ್ಲ. ನಾನು ನನ್ನ ಮುಖ್ಯ ವಿಚಾರಣೆಯಲ್ಲಿ ತಿಳಿಸಿರುವ ಅಂಶಗಳು ಸುಳ್ಳಿನಿಂದ ಕೂಡಿರುತ್ತವೆ ಎಂದರೆ ಸರಿಯಲ್ಲ.

**ಮರು ವಿಚಾರಣೆ ಇಲ್ಲ**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ ಹೇ ಕೇ ಸ ಇ ಎ ಒ.,

ಸಹಿ/-

ಸಾಕ್ಷಿ ಸಹಿಃ

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಮೂಡಿಗೆರೆ.